ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

3

ಇಲಾಖೆ / ವಿಷಯ : DEPARTMENT / SUBJECT: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ        ದಿನಾಂಕ : DATE : 17/2/21

# ಮುಂದಿನ ಅಧಿವೇಶನದಲ್ಲಿ ತಾಪಂ ರದ್ದು ನಿರ್ಣಯ

## ಅಂಗೀಕರಿಸಿ ಕೇಂದ್ರಕ್ಕೆ ರವಾನೆ: ಸಚಿವ ಈಶ್ವರಪ್ಪ | ಸ್ಪೀಕರ್, ಸಿಎಂ, ಸಿದ್ದು ಒಮ್ಮತ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 17/2/21

ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ತಾಲೂಕು ಪಂಚಾಯಿತಿ ವ್ಯವಸ್ಥೆ ಕೈಬಿಡುವ ಬಗ್ಗೆ ಮುಂದಿನ ಅಧಿವೇಶನದಲ್ಲಿ ಚರ್ಚಿಸಿ ನಿರ್ಣಯ ಕೈಗೊಂಡು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್.ಈಶ್ವರಪ್ಪ ಹೇಳಿದ್ದಾರೆ.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಅಧಿವೇಶನದಲ್ಲಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಮುಖ್ಯಮಂತ್ರಿ ಬಿ.ಎಸ್ .ಯಡಿಯೂರಪ್ಪ, ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಸೇರಿದಂತೆ ಹಲವರು ತಾಪಂ ಉಪಯೋಗವಿಲ್ಲ ಎಂಬ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಹೀಗಾಗಿ ಮುಂದಿನ ಅಧಿವೇಶನದ ವೇಳೆ ತಾ.ಪಂ. ವ್ಯವಸ್ಥೆ ರದ್ದತಿ ಸಂಬಂಧ ಚರ್ಚಿಸಿ ನಿರ್ಣಯ ಕೈಗೊಂಡು ಕೇಂದ್ರ ಸರ್ಕಾರಕ್ಕೆ ಕಳುಹಿಸುತ್ತೇವೆ ಎಂದರು.



ತಾಲೂಕು ಪಂಚಾಯಿತಿ ವ್ಯವಸ್ಥೆ ಕೈಬಿಡಲು ಸಂವಿಧಾನಕ್ಕೆ ತಿದ್ದುಪಡಿಯಾಗಬೇಕು. ಕೇಂದ್ರ ಸರ್ಕಾರ ಇತರೆ ರಾಜ್ಯಗಳ ಅಭಿಪ್ರಾಯ ಸಂಗ್ರಹಿಸಬೇಕು. ಹೀಗಾಗಿ ಸದ್ಯಕ್ಕೆ ತಾಲೂಕು ಪಂಚಾಯಿತಿ ವ್ಯವಸ್ಥೆ ಮುಂದುವರಿಯಲಿದೆ. ಮುಂದಿನ ಏಪ್ರಿಲ್‌ನಲ್ಲಿ ರಾಜ್ಯದ ತಾಪಂ ಮತ್ತು ಜಿಪಂಗಳಿಗೆ ಚುನಾವಣೆ ನಡೆಯುವ ಸಾಧ್ಯತೆಯಿದೆ ಎಂದು ಹೇಳಿದರು. ತಮ್ಮ ಇಲಾಖೆಗೆ ಸಂಬಂಧಿಸಿದಂತೆ ಫೆ.18ರಂದು ಸಿಎಂ ಬಜೆಟ್ ಪೂರ್ವಭಾವಿ ಸಭೆ ಕರೆದಿದ್ದಾರೆ. ಬಜೆಟ್‌ನಲ್ಲಿ ಇಲಾಖೆಗೆ ಏನೇನು ಬೇಕು ಎಂಬುದರ ಬಗ್ಗೆ ಮುಖ್ಯಮಂತ್ರಿಗಳಿಗೆ ತಿಳಿಸುತ್ತೇವೆ ಎಂದರು.

**ಗ್ರಾಪಂ ಸದಸ್ಯರಿಗೆ 5 ದಿನ ತರಬೇತಿ:** ರಾಜ್ಯದಲ್ಲಿ 5,728 ಗ್ರಾಮ ಪಂಚಾಯಿತಿಗಳಿಗೆ ನಡೆದ ಚುನಾವಣೆಯಲ್ಲಿ 90,729 ಮಂದಿ ಸದಸ್ಯರಾಗಿ ಆಯ್ಕೆಯಾಗಿದ್ದಾರೆ. ನೂತನ ಸದಸ್ಯರಿಗೆ ಮೈಸೂರಿನ ಅಬ್ದುಲ್ ನಜೀರ್ ಸಾಬ್ 'ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ' ಗ್ರಾಮ ಪಂಚಾಯಿತಿ ಆಡಳಿತ ವ್ಯವಸ್ಥೆ, ಯೋಜನೆ ಅನುಷ್ಠಾನ, ಸದಸ್ಯರ ಪಾತ್ರ ಸೇರಿದಂತೆ ಆಡಳಿತಕ್ಕೆ ಸಂಬಂಧಿಸಿದಂತೆ 850 ಮಂದಿ ಸಂಪನ್ಮೂಲ ವ್ಯಕ್ತಿಗಳ ಮೂಲಕ ತರಬೇತಿ ನೀಡಲಿದೆ. ಇಂದಿನಿಂದ ಐದು ದಿನಗಳ ಕಾಲ ರಾಜ್ಯದ 285 ಕೇಂದ್ರಗಳಲ್ಲಿ ತರಬೇತಿ ನಡೆಯಲಿದೆ. ತರಬೇತಿಗೆ 23 ಕೋಟಿ ರು. ವೆಚ್ಚ ಮಾಡಲಾಗುತ್ತಿದೆ. ಈ ತರಬೇತಿ ಮುಗಿದ ಬಳಿಕ ಗ್ರಾಪಂ ಅಧ್ಯಕ್ಷರು ಮತ್ತು ಉಪಾಧ್ಯಕ್ಷರಿಗೂ ಐದು ದಿನಗಳ ಕಾಲ ತರಬೇತಿ ನೀಡಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ಗ್ರಾಮಗಳ ಅಭಿವೃದ್ಧಿ ದೃಷ್ಟಿಯಿಂದ ಜನಸಂಖ್ಯೆಗೆ ಅನುಗುಣವಾಗಿ ಗ್ರಾಪಂಗೆ ಅನುದಾನ ನೀಡಲು ನಿರ್ಧರಿಸಲಾಗಿದೆ. ವರ್ಷಕ್ಕೆ ಪ್ರತಿ ಗ್ರಾಪಂಗೆ ಸುಮಾರು ₹1.50 ಕೋಟಿವರೆಗೂ ಅನುದಾನ ಸಿಗಲಿದೆ ಎಂದರು